# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಹಂತ-8 ಬ್ಯಾಚ್-2 ಮತ್ತು ಹಂತ-10ರ ಕಾಮಗಾರಿಗಳ ಅನುಷ್ಠಾನದಲ್ಲಿ ಅಂದಾಜು ಮೊತ್ತಕ್ಕಿಂತ ಹೆಚ್ಚುವರಿಯಾದ (tender premium) ವೆಚ್ಚವನ್ನು ಭರಿಸಲು 3ನೇ ಮತ್ತು 4ನೇ ತ್ರೈಮಾಸಿಕ ಅನುದಾನ ಬಿಡುಗಡೆಗೊಳಿಸುವ ಕುರಿತು.

ಓದಲಾಗಿದೆ:

1. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು ರವರ ಪತ್ರ ಸಂಖ್ಯೆ:ಕೆಆರ್‌ಆರ್‌ಡಿಎ/ಎಸಿಸಿ-01612/ಜಿಟಿಎಂ/ನಿ.ನಿ/2014-15/1940, ದಿನಾಂಕ:2-8-2014 ಮತ್ತು 8684, ದಿನಾಂಕ:19-2-2015.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:50:ಆರ್‌ಆರ್‌ಸಿ:2014, ದಿನಾಂಕ:21-1-2015.
3. ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/343/ವೆಚ್ಚ-6/2013, ದಿನಾಂಕ:20-3-2015.

**ಪ್ರಸ್ತಾವನೆ:**

ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಹಂತ-8 ಬ್ಯಾಚ್-2 ಮತ್ತು ಹಂತ-10ರಡಿ
ಕೇಂದ್ರ ಸರ್ಕಾರವು ಗ್ರಾಮೀಣ ರಸ್ತೆ ಕಾಮಗಾರಿಗಳಿಗೆ ಅನುಮೋದನೆ ನೀಡಲಾಗಿತ್ತು. ಪ್ರಧಾನ ಮಂತ್ರಿ
ಗ್ರಾಮ ಸಡಕ್ ಯೋಜನೆಯ ಮಾರ್ಗಸೂಚಿಯಂತೆ ಈ ಯೋಜನೆಯಡಿ ಅನುಷ್ಠಾನಗೊಳಿಸುವ
ಕಾಮಗಾರಿಯ ಟೆಂಡರ್ ಪ್ರೀಮಿಯಂ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸಬೇಕಾಗಿರುತ್ತದೆ.
2014-15ನೇ ಸಾಲಿಗೆ ಲೆಕ್ಕಶೀರ್ಷಿಕೆ-5054-03-337-0-71-172/422/ 423ರಡಿ ಪ್ರಧಾನ
ಮಂತ್ರಿ ಗ್ರಾಮ ಸಡಕ್ ಯೋಜನೆ - ರಸ್ತೆಗಳು ಇದರಡಿ ಆರ್ಥಿಕ ಇಲಾಖೆಯು ಆಯವ್ಯಯದಲ್ಲಿ
ರೂ.350.00ಕೋಟಿ ಒದಗಿಸಲಾಗಿದ್ದು, ಪ್ರಸ್ತುತ 2014-15ನೇ ಸಾಲಿನಲ್ಲಿ ಹಂತ-8 ಬ್ಯಾಚ್-2
ಮತ್ತು ಹಂತ-10ರ ಕಾಮಗಾರಿಗಳ ಟೆಂಡರ್ ಪ್ರೀಮಿಯಂ ವೆಚ್ಚವನ್ನು ಭರಿಸಲು ಅನುದಾನ
ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ-1ರಲ್ಲಿ KRRDA ಸಂಸ್ಥೆಯು ಕೋರಿರುತ್ತದೆ. PMGSY
ಕಾಮಗಾರಿಗಳಿಗೆ ಟೆಂಡರ್ ಪ್ರೀಮಿಯಂ ವೆಚ್ಚ ಭರಿಸಲು ಲೆಕ್ಕಶೀರ್ಷಿಕೆ-5054-03-337-0-71-
ಯೋಜನೆ ಅಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಮೊದಲ ಮತ್ತು ದ್ವಿತೀಯ ತ್ರೈಮಾಸಿಕ ಕಂತಿನ
ಅನುದಾನ ರೂ.774.16ಲಕ್ಷಗಳನ್ನು ಮೇಲೆ ಓದಲಾದ-2ರ ಆದೇಶದಲ್ಲಿ ಈಗಾಗಲೇ ಬಿಡುಗಡೆ
ಮಾಡಲಾಗಿದೆ. ಸದರಿ ಲೆಕ್ಕಶೀರ್ಷಿಕೆಯಡಿಯ ಆಯವ್ಯಯದಲ್ಲಿ ಮೂರು ಮತ್ತು ನಾಲ್ಕನೇ ತ್ರೈಮಾಸಿಕ
ಕಂತಿನ ಅನುದಾನ ರೂ.991.42ಲಕ್ಷಗಳನ್ನು ಬಿಡುಗಡೆ ಮಾಡಲು ಮೇಲೆ ಓದಲಾದ-3ರಲ್ಲಿ ಆರ್ಥಿಕ
ಇಲಾಖೆಯು ಸಹಮತಿ ನೀಡಿದ್ದು, ಅದರಂತೆ ಟೆಂಡರ್ ಪ್ರೀಮಿಯಂ ವೆಚ್ಚ ಭರಿಸಲು
ರೂ.991.42ಲಕ್ಷಗಳನ್ನು ಪಿಎಂಜಿಎಸ್‌ವೈ ಯೋಜನಾ ವಿಭಾಗಗಳಿಗೆ ಕರ್ನಾಟಕ ಗ್ರಾಮೀಣ ರಸ್ತೆ
ಅಭಿವೃದ್ಧಿ ಸಂಸ್ಥೆ, ಬೆಂಗಳೂರು ಇವರ ಮುಖಾಂತರ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:50/1:ಆರ್‌ಆರ್‌ಸಿ:2014, ಬೆಂಗಳೂರು, ದಿನಾಂಕ:25-3-2015.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರವು ಪ್ರಧಾನ ಮಂತ್ರಿ ಗ್ರಾಮ ಸಡಕ್
ಯೋಜನೆಯ ಹಂತ-8 ಬ್ಯಾಚ್-2 ಮತ್ತು ಹಂತ-10ರಡಿ ನಿರ್ಮಾಣಗೊಂಡ ಕಾಮಗಾರಿಗಳಿಗೆ
ಟೆಂಡರ್ ಪ್ರೀಮಿಯಂಗಾಗಿ ಪ್ರಸ್ತುತ 2014-15ನೇ ಸಾಲಿನಲ್ಲಿ

**ಲೆಕ್ಕಶೀರ್ಷಿಕೆ–**

| | |
|---|---|
| 1. 5054-03-337-0-71-172 (ರಸ್ತೆಗಳು)ರಡಿ | ರೂ.752.00ಲಕ್ಷ |
| 2. 5054-03-337-0-71-422 (SCP)ರಡಿ | ರೂ.170.00ಲಕ್ಷ |
| 3. 5054-03-337-0-71-423 (TSP)ರಡಿ | ರೂ. 69.42ಲಕ್ಷ |
| ಒಟ್ಟು | ರೂ.991.42ಲಕ್ಷ |

ಸೇರಿ ಒಟ್ಟಾರೆ ರೂ.**991.42**ಲಕ್ಷಗಳನ್ನು (ರೂ. **ಒಂಬೈನೂರ ತೊಂಬತ್ತೊಂದು ಲಕ್ಷಗಳು ಮತ್ತು ನಲವತ್ತೆರಡು ಸಾವಿರ** ಮಾತ್ರ) ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಬೆಂಗಳೂರು ಇವರ ಮುಖಾಂತರ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ. ಈ ಅನುದಾನವನ್ನು ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆಯಲ್ಲಿ ಪ್ರತ್ಯೇಕವಾದ ಪ್ರೋಗ್ರಾಂ ಖಾತೆಯಲ್ಲಿರಿಸಿಕೊಂಡು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಚಾಲನಾ ಕೈಪಿಡಿ ನಿಯಮಗಳಂತೆ ನಿರ್ವಹಿಸುವುದು ಮತ್ತು ಅನುದಾನವನ್ನು ಸಂಬಂಧಿಸಿದ ಪಿಎಂಜಿಎಸ್‌ವೈ ಯೋಜನಾ ವಿಭಾಗಗಳು ಈ ಕೆಳಕಂಡ ಷರತ್ತಿಗೊಳಪಟ್ಟು ವಿನಿಯೋಗಿಸತಕ್ಕದ್ದು.

**ಷರತ್ತುಗಳು:**

1. ಸದರಿ ಅನುದಾನವನ್ನು ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ರವರು ಗ್ರಾಂಟ್-ಇನ್-ಏಡ್ ಬಿಲ್ಲು ಸಲ್ಲಿಸಿ, ನಿರ್ದೇಶಕರು, ಗ್ರಾಮೀಣ ಮೂಲಭೂತ ಸೌಲಭ್ಯಗಳು ರವರ ಮೇಲು ರುಜು ಪಡೆದು ಖಜಾನೆಯಿಂದ ಚೆಕ್ ಪಡೆಯುವುದು.
2. ಹಂತ-8 ಬ್ಯಾಚ್-2 ಮತ್ತು ಹಂತ-10ರಡಿಯಲ್ಲಿನ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಟೆಂಡರ್ ಪ್ರೀಮಿಯಂ ಹಣವನ್ನು ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಮಾತ್ರ ಪಾವತಿಸತಕ್ಕದ್ದು. ಯಾವುದೇ ಕಾರಣಕ್ಕೂ ಅಪೂರ್ಣಗೊಂಡ ಕಾಮಗಾರಿಗಳಿಗೆ ಟೆಂಡರ್ ಪ್ರೀಮಿಯಂ ಪಾವತಿಸತಕ್ಕದ್ದಲ್ಲ.
3. Expenditure should be booked under SCP/TSP also, in proportion to B.E.
4. ಪ್ರಸ್ತುತ ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನಕ್ಕೆ ಹಂತವಾರು ಹಾಗೂ ಪ್ಯಾಕೇಜ್‌ವಾರು ಟೆಂಡರ್ ಪ್ರೀಮಿಯಂ ವಿವರವನ್ನು ಒದಗಿಸತಕ್ಕದ್ದು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ರವರು ಸದರಿ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
6. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗದಿಗೊಳಿಸಿದ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ **ಸಂಖ್ಯೆ:ಆಇ/343/ವೆಚ್ಚ-6/2013, ದಿನಾಂಕ:20-3-2015**ರಲ್ಲಿ ನೀಡಿದ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:-**

1. ಮಹಾಲೇಖಪಾಲಕರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲಕರು (ಆಡಿಟ್-1), ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲಕರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
9. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
10. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
12. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
14. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
15. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
17. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
18. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
19. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ
20. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
21. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.